# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೊಂಭತ್ತನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಸೋಮವಾರ, ದಿನಾಂಕ: 20ನೇ ಫೆಬ್ರವರಿ, 2023**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) **<u>ತಡೆಹಿಡಿಯಲಾದ ಪ್ರಶ್ನೆ:</u>**

| | |
|---|---|
| 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪಿ.ಆರ್. ರಮೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 10 (86) | ಮಾನ್ಯ ಜೀವಿ ಪರಿಸ್ಥಿತಿ ಮತ್ತು ಪರಿಸರ ಹಾಗೂ ಪ್ರವಾಸೋದ್ಯಮ ಸಚಿವರ |
| 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಅರವಿಂದ ಕುಮಾರ್ ಅರಳಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 13(80)<br>1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 14(106)<br>1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಯು.ಬಿ. ವೆಂಕಟೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 15(2) | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

## 02. ವರದಿಯನ್ನೊಪ್ಪಿಸುವುದು

**ಶ್ರೀ ಅ. ದೇವೇಗೌಡ,** (ಸದಸ್ಯರು, ಜಂಟಿ ಸದನ ಸಮಿತಿ) ಅವರು ರಾಜ್ಯದಲ್ಲಿನ ಶುದ್ಧ ಕುಡಿಯುವ ನೀರಿನ ಘಟಕಗಳ ಅಳವಡಿಕೆ ಮತ್ತು ನಿರ್ವಹಣೆಯ ವಿಚಾರದಲ್ಲಿ ನಡೆದಿರುವ ಅವ್ಯವಹಾರಗಳ ಕುರಿತಂತೆ ವಿಚಾರಣೆ ನಡೆಸಲು ರಚಿಸಲಾಗಿರುವ ವಿಧಾನ ಮಂಡಲದ ಜಂಟಿ ಸದನ ಸಮಿತಿಯ ವರದಿಯನ್ನೊಪ್ಪಿಸುವುದು.

..2..

## 03. ಸದನ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

**ಶ್ರೀ ಎನ್. ರವಿಕುಮಾರ್ (ಅಧ್ಯಕ್ಷರು, ವಿಶೇಷ ಜಂಟಿ ಸದನ ಸಮಿತಿ) ಅವರು:-**

"ರಾಜ್ಯದಲ್ಲಿ 2020-21ನೇ ಸಾಲಿನಲ್ಲಿ ಹೊಸದಾಗಿ ನರ್ಸಿಂಗ್ ಮತ್ತು ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳಿಗೆ ಮೂಲ ಸೌಕರ್ಯಗಳಿಲ್ಲದಿದ್ದರೂ ಅನುಮತಿ ನೀಡಿ ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಅವರು ಹೊರಡಿಸಿರುವ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ವಿಷಯವನ್ನು ಪರಿಶೀಲಿಸಿ ವರದಿಯನ್ನು ನೀಡಲು ರಚಿಸಲಾಗಿರುವ ವಿಶೇಷ ಜಂಟಿ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ಇನ್ನೂ 12 ತಿಂಗಳ ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು".

## 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಅರುಣ್ ಡಿ.ಎಸ್.** ಅವರು ಭೋವಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ಸೂಕ್ತ ತನಿಖೆ ನಡೆಸುವ ಕುರಿತು ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

02. **ಶ್ರೀ ಶರವಣ ಟಿ.ಎ.** ಅವರು ರಾಜ್ಯಾದ್ಯಂತ ಅದರಲ್ಲೂ ವಿಶೇಷವಾಗಿ ಬೆಂಗಳೂರಿನ ಗಿರವಿ ಅಂಗಡಿ ಹಾಗೂ ಚಿನ್ನದ ಅಂಗಡಿ ಮಾಲೀಕರಿಗೆ ರಿಕವರಿ ನೆಪದಲ್ಲಿ ಪೊಲೀಸರು ನೀಡುತ್ತಿರುವ ಕಿರುಕುಳದ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

03. **ಶ್ರೀ ಪಿ.ಆರ್. ರಮೇಶ್** ಅವರು ಬಿಬಿಎಂಪಿ ವ್ಯಾಪ್ತಿಯಲ್ಲಿನ ರಸ್ತೆ ಗುಂಡಿಗಳನ್ನು ಮುಚ್ಚುವ ಸಲುವಾಗಿ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

04. **ಶ್ರೀ ಶಶೀಲ್ ಜಿ. ನಮೋಶಿ** ಅವರು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನೆ 1961 ಕಲಂ 4(ಎ)(1)ರ ಅಧಿಸೂಚನೆ ಅನ್ವಯ ಕಲ್ಬುರ್ಗಿ ನಗರ ಯೋಜನಾ ಪ್ರದೇಶಕ್ಕೆ ಗ್ರಾಮಗಳನ್ನು ಸೇರ್ಪಡೆ ಮಾಡಿದ್ದರೂ ಕಾರ್ಯರೂಪಕ್ಕೆ ಬಾರದಿರುವ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು

05. **ಶ್ರೀ ಸಿ.ಎನ್. ಮಂಜೇಗೌಡ** ಅವರು ಕಾರ್ಮಿಕ ವಿಮಾ ಆಸ್ಪತ್ರೆಗಳನ್ನು (ಇ.ಎಸ್.ಐ) ಸೊಸೈಟಿಯಾಗಿ ಪರಿವರ್ತಿಸಿ ಖಾಸಗೀಕರಣಗೊಳಿಸುವುದರ ಬದಲಾಗಿ ಆಸ್ಪತ್ರೆಗಳನ್ನು ಅತ್ಯಾಧುನಿಕ ವೈದ್ಯಕೀಯ ಉಪಕರಣದೊಂದಿಗೆ ಮೇಲ್ದರ್ಜೆಗೇರಿಸುವ ಕುರಿತು ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳಯುವುದು

06. **ಶ್ರೀ ಕೆ. ಹರೀಶ್ ಕುಮಾರ್** ಅವರು ಕರಾವಳಿ ಜಿಲ್ಲೆಯ ಸುತ್ತಮುತ್ತಲಿನ ಪಂಚ ಜಿಲ್ಲೆಗಳಿಗೆ ಅನುಕೂಲವಾಗುವಂತೆ ಹೈಕೋರ್ಟ್ ವಿಭಾಗೀಯ ಪೀಠವನ್ನು ಸ್ಥಾಪಿಸಬೇಕೆನ್ನುವ ಕುರಿತು ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು

## 05. ನಿಯಮ 330ರ ಮೇರೆಗೆ

೦1. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ರಾಜ್ಯ ಸರ್ಕಾರದಿಂದ ಹಾಲು ಒಕ್ಕೂಟಗಳಿಗೆ ನೀಡಬೇಕಾಗಿರುವ ನೂರಾರು ಕೋಟಿ ಸಹಾಯಧನ ಬಿಡುಗಡೆ ಮಾಡದಿರುವುದರಿಂದ ರಾಜ್ಯದಲ್ಲಿ ಹಾಲು ಉತ್ಪಾದಕರು ಎದುರಿಸುತ್ತಿರುವ ಸಂಕಷ್ಟದ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಮಂಜುನಾಥ್ ಭಂಡಾರಿ** ಅವರು ಕರಾವಳಿ ಜಿಲ್ಲೆಯ ಪ್ರಸಿದ್ಧ ಗ್ರಾಮೀಣ ಕ್ರೀಡೆಯಾದ ಕಂಬಳವನ್ನು ರಾಜ್ಯ ಮಟ್ಟದ ಹಾಗೂ ಕರಾವಳಿಯ ನಾಡ ಕ್ರೀಡೆಯಾಗಿ ಘೋಷಿಸುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಎಸ್.ಎಲ್. ಭೋಜೇಗೌಡ, ಶ್ರೀ ಶರವಣ ಟಿ.ಎ, ಶ್ರೀ ಸಿ.ಎನ್. ಮಂಜೇಗೌಡ ಹಾಗೂ ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರುಗಳು ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿರುವ ಗ್ರಾಮ ಪಂಚಾಯತಿಗಳಿಂದಲೇ ಹಣ ಸಂಗ್ರಹಿಸಲು ಸರ್ಕಾರ ಮುಂದಾಗಿರುವ ಕುರಿತು ಪ್ರಸ್ತಾಪಿಸುವುದು.

## 06. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ

"2023ನೇ ಫೆಬ್ರವರಿ, 10ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾ ಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:13.02.2023ರಂದು **ಡಾ॥ ತೇಜಸ್ವಿನಿ ಗೌಡ** ರವರು ಸೂಚಿಸಿದ ಪ್ರಸ್ತಾವದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ.

## 07. ವಿತ್ತೀಯ ಕಾರ್ಯಕಲಾಪ

2023–24ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**